ದೂರವಾಣಿ ಸಂಖ್ಯೆ: 080-22212343
ಫ್ಯಾಕ್ಸ್ ಸಂಖ್ಯೆ: 080-22278803
ಅಂತರ್ಜಾಲ: www.kptcl.com
ಇ-ಮೇಲ್ ವಿಳಾಸ: director.ahr.kptcl@gmail.com

# ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ

Corporate Identity Number (CIN): U40109KA1999SGC025521

**(ಕಂಪನಿಯ ಅಧಿಕೃತ ಕಚೇರಿ: ನಿಗಮ ಕಾರ್ಯಾಲಯ, ಕಾವೇರಿ ಭವನ, ಕೆ.ಜಿ.ರಸ್ತೆ, ಬೆಂಗಳೂರು-560 009)**

**ವಿಷಯ:** ಪ್ರಭಾರ ಭತ್ಯೆ ದರಗಳನ್ನು ಪರಿಷ್ಕರಿಸುವ ಬಗ್ಗೆ.

***

**ಓದಲಾಗಿದೆ:**

1. ಪರಿಷ್ಕೃತ ವೇತನ ಮತ್ತು ಇತ್ಯಾದಿ ವಿಷಯಗಳ ಬಗ್ಗೆ ದಿನಾಂಕ: 02.03.2018 ರಂದು ಕವಿಪ್ರನಿನಿ ನೌಕರರ ಸಂಘ (ನೋ.ಸ.659) ಮತ್ತು ನಿಗಮದ ಆಡಳಿತ ವರ್ಗದ ನಡುವೆ ಆದ ಒಪ್ಪಂದ.
2. ದಿನಾಂಕ: 01.04.2017 ರಿಂದ ಅನ್ವಯವಾಗುವಂತೆ ನಿಗಮದ ನೌಕರರಿಗೆ ವೇತನವನ್ನು ಪರಿಷ್ಕರಿಸಿ ಹೊರಡಿಸಿರುವ ನಿಗಮದ ಆದೇಶ ಸಂಖ್ಯೆ: ಕವಿಪ್ರನಿನಿ/ಬಿ16/69516/2017-18 ದಿನಾಂಕ: 09.03.2018.
3. ದಿನಾಂಕ: 01.04.2017 ರಿಂದ ಅನ್ವಯವಾಗುವಂತೆ ನಿಗಮದ ಅಧಿಕಾರಿಗಳಿಗೆ ವೇತನವನ್ನು ಪರಿಷ್ಕರಿಸಿ ಹೊರಡಿಸಿರುವ ನಿಗಮದ ಆದೇಶ ಸಂಖ್ಯೆ: ಕವಿಪ್ರನಿನಿ/ಬಿ16/69517/2017-18 ದಿನಾಂಕ: 09.03.2018.
4. ಪ್ರಭಾರ ಭತ್ಯೆಯ ದರಗಳನ್ನು ಪರಿಷ್ಕರಿಸಿ ಹೊರಡಿಸಿರುವ ಸರ್ಕಾರದ ಆದೇಶ ಸಂಖ್ಯೆ: ಎಫ್‌ಡಿ 08 ಎಸ್‌ಆರ್‌ಎಸ್ 2018 ದಿನಾಂಕ: 30.04.2019.
5. ನಿಗಮ ಕಾರ್ಯಾಲಯದ ದಿನಾಂಕ: 13.05.2019 ರ ಟಿಪ್ಪಣಿ.

**ಪೀಠಿಕೆ:**

ಪ್ರಸ್ತುತ ರಾಜ್ಯದಲ್ಲಿ ಸರ್ಕಾರಿ ನೌಕರರು/ಅಧಿಕಾರಿಗಳ ಕೊರತೆಯಿಂದಾಗಿ ಹಲವಾರು ಅಧಿಕಾರಿಗಳು ಒಂದಕ್ಕಿಂತ ಹೆಚ್ಚಿನ ಹುದ್ದೆಗಳಲ್ಲಿ ಅಧಿಕ ಪ್ರಭಾರ/ಸಮವರ್ತಿತ ಪ್ರಭಾರದಲ್ಲಿ ಕಾರ್ಯ ನಿರ್ವಹಿಸುತ್ತಿದ್ದು, ಈ ರೀತಿ ಹೆಚ್ಚಿನ ಕಾರ್ಯಭಾರದ ಒತ್ತಡದಲ್ಲಿ ಕಾರ್ಯನಿರ್ವಹಿಸುತ್ತಿರುವವರಿಗೆ ಪ್ರಸ್ತುತ ನೀಡುತ್ತಿರುವ ಶೇಕಡ 7.5 ದರದಲ್ಲಿನ ಪ್ರಭಾರ ಭತ್ಯೆ ಕಡಿಮೆ ಎಂಬ ಅಭಿಪ್ರಾಯಗಳ ಹಿನ್ನಲೆಯಲ್ಲಿ ಹಾಗೂ ಪ್ರಭಾರ ಭತ್ಯೆಯು 7 ವರ್ಷಗಳಷ್ಟು ಹಿಂದಿನ ಅವಧಿಯಲ್ಲಿ ಪರಿಷ್ಕರಿಸಲ್ಪಟ್ಟಿರುವುದರಿಂದ, ಸರ್ಕಾರವು ಪ್ರಭಾರ ಭತ್ಯೆಯ ದರವನ್ನು ಪರಿಷ್ಕರಿಸಿ ಉಲ್ಲೇಖ-4 ರಲ್ಲಿ ಆದೇಶವನ್ನು ಹೊರಡಿಸಿರುತ್ತದೆ. ರಾಜ್ಯ ಸರ್ಕಾರವು ಹೊರಡಿಸಿರುವ ಆದೇಶವನ್ನು ನಿಗಮವು ಅಳವಡಿಸಿಕೊಂಡು ಈ ಕೆಳಕಂಡಂತೆ ಆದೇಶಿಸಿದೆ:-

**ಆದೇಶ ಸಂಖ್ಯೆ: ಕವಿಪ್ರನಿನಿ/ಬಿ16/780/2019-20, ಬೆಂಗಳೂರು, ದಿನಾಂಕ:** 20 MAY 2019

ನಿಗಮದ ನೌಕರರು/ಅಧಿಕಾರಿಗಳನ್ನು ಕವಿಮಂ ನೌಕರರ ಸೇವಾ ನಿಬಂಧನೆಗಳ ನಿಬಂಧನೆ-51 ರಂತೆ ಸ್ವತಂತ್ರ ಪ್ರಭಾರದಲ್ಲಾಗಲಿ ಅಥವಾ ತಮ್ಮ ಹುದ್ದೆಯ ಕರ್ತವ್ಯದ ಜೊತೆ ಬೇರೊಂದು ಹುದ್ದೆಯಲ್ಲಿ ಅಧಿಕ ಪ್ರಭಾರದಲ್ಲಿರಿಸಿದಾಗ ಆ ಹುದ್ದೆಯ ವೇತನ ಶ್ರೇಣಿಯ ಕನಿಷ್ಟ ವೇತನದಲ್ಲಿ **ಮೊದಲ ಮೂರು ತಿಂಗಳವರೆಗೆ ಶೇಕಡಾ 7.5 ರ ದರದಲ್ಲಿ**, ಆ ನಂತರದ **ಮೂರು ತಿಂಗಳಿಗಿಂತ ಹೆಚ್ಚಿನ ಅವಧಿಗೆ ಶೇಕಡಾ 15 ರ ದರದಲ್ಲಿ** ಪ್ರಭಾರ ಭತ್ಯೆಯನ್ನು ನಿಗದಿಪಡಿಸಲಾಗಿದೆ.

ಕವಿಮಂ ನೌಕರರ ಸೇವಾ ನಿಬಂಧನೆಗಳ ನಿಬಂಧನೆ-51 ಮೇಲಿನಂತೆ ತಿದ್ದುಪಡಿಯಾಗಿರುತ್ತದೆ ಹಾಗೂ ಪ್ರಭಾರ ಭತ್ಯೆಯನ್ನು ಪಾವತಿಸುವ ವಿಷಯದಲ್ಲಿನ ಇತರೆ ನಿಯಮ ಮತ್ತು ಷರತ್ತುಗಳು ಯಥಾವತ್ತಾಗಿ ಮುಂದುವರೆಯುತ್ತದೆ. ಸದರಿ ಪ್ರಭಾರ ಭತ್ಯೆ ದರಗಳು **ಈ ಆದೇಶದ ದಿನಾಂಕದಿಂದ ಅನ್ವಯವಾಗುವಂತೆ ಜಾರಿಗೆ ಬರುತ್ತದೆ.**

"ಟಿಪ್ಪಣಿಯು ವ್ಯವಸ್ಥಾಪಕ ನಿರ್ದೇಶಕರು, ಕವಿಪ್ರನಿನಿ ರವರಿಂದ ಅನುಮೋದಿಸಲ್ಪಟ್ಟಿರುತ್ತದೆ"

ನಿರ್ದೇಶಕರು
(ಆಡಳಿತ ಮತ್ತು ಮಾನವ ಸಂಪನ್ಮೂಲ)

**ಗೆ:**

1. ವ್ಯವಸ್ಥಾಪಕ ನಿರ್ದೇಶಕರು, ಬೆಸ್ಕಾಂ/ಜೆಸ್ಕಾಂ/ಹೆಸ್ಕಾಂ/ಮೆಸ್ಕಾಂ/ಸೆಸ್ಕ್/ಪಿ.ಸಿ.ಕೆ.ಎಲ್.
2. ಎಲ್ಲಾ ನಿರ್ದೇಶಕರು(ತಾಂತ್ರಿಕ), ಎಸ್ಕಾಂಗಳು.

3. ಎಲ್ಲಾ ಆರ್ಥಿಕ ಸಲಹೆಗಾರರು, ಕವಿಪ್ರನಿನಿ/ಎಸ್ಕಾಂಗಳು.
4. ಎಲ್ಲಾ ಮುಖ್ಯ ಇಂಜಿನಿಯರ್(ವಿ), ಕವಿಪ್ರನಿನಿ/ಎಸ್ಕಾಂಗಳು.
5. ಹಿರಿಯ ಆಪ್ತ ಕಾರ್ಯದರ್ಶಿಗಳು, ವ್ಯವಸ್ಥಾಪಕ ನಿರ್ದೇಶಕರು/ನಿರ್ದೇಶಕರು (ಪ್ರಸರಣ)/ನಿರ್ದೇಶಕರು (ಹಣಕಾಸು)/ ನಿರ್ದೇಶಕರು (ಆಡಳಿತ ಮತ್ತು ಮಾನವ ಸಂಪನ್ಮೂಲ), ಕವಿಪ್ರನಿನಿ.

www.kptcl.com/eprasarana for information of:

6. ಎಲ್ಲಾ ಅಧೀಕ್ಷಕ ಇಂಜಿನಿಯರ್ (ವಿ)/ನಿಯಂತ್ರಣಾಧಿಕಾರಿಗಳು, ಕವಿಪ್ರನಿನಿ/ಎಸ್ಕಾಂಗಳು.
7. ಎಲ್ಲಾ ಕಾರ್ಯನಿರ್ವಾಹಕ ಇಂಜಿನಿಯರ್ (ವಿ)/ಉಪ ಲೆಕ್ಕನಿಯಂತ್ರಣಾಧಿಕಾರಿಗಳು, ಕವಿಪ್ರನಿನಿ/ಎಸ್ಕಾಂಗಳು.
8. ಎಲ್ಲಾ ಅಧಿಕಾರಿಗಳು, ನಿಗಮ ಕಾರ್ಯಾಲಯ, ಕವಿಪ್ರನಿನಿ, ಕಾವೇರಿ ಭವನ, ಬೆಂಗಳೂರು.
9. ಕ್ರೋಢೀಕರಣ ಘಟಕ, ನಿಗಮ ಕಾರ್ಯಾಲಯ, ಕವಿಪ್ರನಿನಿ, ಕಾವೇರಿ ಭವನ, ಬೆಂಗಳೂರು.

ಪ್ರತಿಯನ್ನು ಮಾಹಿತಿಗಾಗಿ ರವಾನಿಸಿದೆ:-

1. ಶ್ರೀ.ಟಿ.ಆರ್.ರಾಮಕೃಷ್ಣಯ್ಯ, ಅಧ್ಯಕ್ಷರು, ಕವಿಪ್ರನಿ ನೌಕರರ ಸಂಘ (ನೋಂದಣಿ ಸಂಖ್ಯೆ: 659), ಬೆಂಗಳೂರು ಮತ್ತು ನಿರ್ದೇಶಕರು, ಕವಿಪ್ರನಿನಿ ಹಾಗೂ ಎಲ್ಲಾ ಎಸ್ಕಾಂಗಳು.
2. ಶ್ರೀ.ಪಿ.ಎನ್.ಜಯರಾಜ್, ಅಧ್ಯಕ್ಷರು, ಕವಿಮಂ ಇಂಜಿನಿಯರ್‌ಗಳ ಸಂಘ, ಬೆಂಗಳೂರು, ಮತ್ತು ನಿರ್ದೇಶಕರು, ಕವಿಪ್ರನಿನಿ ಹಾಗೂ ಎಲ್ಲಾ ಎಸ್ಕಾಂಗಳು.
3. ಪ್ರಧಾನ ಕಾರ್ಯದರ್ಶಿ, ಕವಿಪ್ರನಿ ನೌಕರರ ಸಂಘ(ನೋಂದಣಿ ಸಂಖ್ಯೆ: 659), ಬೆಂಗಳೂರು.
4. ಪ್ರಧಾನ ಕಾರ್ಯದರ್ಶಿ, ಕವಿಮಂ ಇಂಜಿನಿಯರ್‌ಗಳ ಸಂಘ, ಬೆಂಗಳೂರು.
5. ಪ್ರಧಾನ ಕಾರ್ಯದರ್ಶಿ, ಕವಿಪ್ರನಿನಿ, ಲೆಕ್ಕಾಧಿಕಾರಿಗಳ ಸಂಘ, ಬೆಂಗಳೂರು.
6. ಪ್ರಧಾನ ಕಾರ್ಯದರ್ಶಿ, ಕವಿಮಂ, ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ವರ್ಗಗಳ ಕಲ್ಯಾಣ ಸಂಸ್ಥೆ(ರಿ), ಬೆಂಗಳೂರು.
7. ಪ್ರಧಾನ ಕಾರ್ಯದರ್ಶಿ, ಕವಿಪ್ರನಿನಿ, ಡಿಪ್ಲೋಮಾ ಇಂಜಿನಿಯರ್‌ಗಳ ಸಂಘ, ಬೆಂಗಳೂರು.
8. ಪ್ರಧಾನ ಕಾರ್ಯದರ್ಶಿ, ಕವಿಪ್ರನಿನಿ/ಎಸ್ಕಾಂ ಪ.ಜಾ/ಪ.ಪಂ ಅಧಿಕಾರಿಗಳ ಸಂಘ, ಬೆಂಗಳೂರು.
9. ಪ್ರಧಾನ ಕಾರ್ಯದರ್ಶಿ, ಕವಿಪ್ರನಿನಿ, ಪಿಂಚಣಿದಾರರ ಸಂಘ, ಕಾವೇರಿಭವನ, ಬೆಂಗಳೂರು.